ಈರಣ್ಣ ಕಡಾಡಿ ಅವರು 101ನೇ ಮತ ಕೇಂದ್ರದಲ್ಲಿ ಕುಟುಂಬಸ್ಥರೊಂದಿಗೆ ಮತ ಚಲಾವಣೆ

ಮೂಡಲಗಿ: 5 ವರ್ಷಗಳ ಕಾಲ ರಾಷ್ಟ್ರವನ್ನಾಳುವ ಸರ್ಕಾರವನ್ನು ಆಯ್ಕೆ ಮಾಡುವ ಅತ್ಯಂತ ಮಹತ್ವ ಪೂರ್ಣವಾದ ಜವಾಬ್ದಾರಿ ಮತದಾರರ ಮೇಲಿದ್ದು, ಮತ ಎಂಬುವುದು ಒಂದು ಬ್ರಹ್ಮಾಸ್ತ್ರವಿದಂತೆ ಅದನ್ನು ಬಳಸುವ ಮೂಲಕ ಒಂದು ಒಳ್ಳೆಯ ಸರ್ಕಾರವನ್ನು ರಚನೆ ಮಾಡಲು ಕಾರಣಿ ಭೂತರಾಗಬೇಕೆಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಮತದಾರರಿಗೆ ವಿನಂತಿಸಿದರು.

ಲೋಕಸಭಾ ಕ್ಷೇತ್ರದ ಚುನಾವಣೆ ದಿನದಂದು ತಾಲೂಕಿನ ಕಲ್ಲೋಳಿ ಪಟ್ಟಣದ 101ನೇ ಮತ ಕೇಂದ್ರದಲ್ಲಿ ಕುಟುಂಬಸ್ಥರೊಂದಿಗೆ ಮತ ಚಲಾಯಿಸಿ ಮಾತನಾಡಿದರು.

ಜಗತ್ತಿನ ಬೇರೆ ಬೇರೆ ದೇಶಗಳ ಸುಮಾರು 20 ರಾಜಕೀಯ ಪಕ್ಷಗಳು ಈ ಚುನಾವಣೆಯ ಅಧ್ಯಯನ ಮಾಡಲಿಕ್ಕೆ ಭಾರತಕ್ಕೆ ಬಂದಿದ್ದಾರೆ ಇದು ಅತ್ಯಂತ ಗಮನಾರ್ಹ ಅಂಶವೆಂದು ಹೇಳಿದರು.

ಕಳೆದ ಒಂದು ತಿಂಗಳುಗಳ ಕಾಲ ನಮ್ಮೆಲ್ಲ ಕಾರ್ಯಕರ್ತರ ಪರಿಶ್ರಮದ ಫಲವಾಗಿ ಬೆಳಗಾವಿ ಮತ್ತು ಚಿಕ್ಕೋಡಿ ಈ ಎರಡು ಲೋಕಸಭಾ ಕ್ಷೇತ್ರದ ಅಭ್ಯರ್ಥಿಗಳು ಹೆಚ್ಚು ಮತಗಳನ್ನು ಪಡೆಯುವ ಮೂಲಕ ನೀರಿಕ್ಷಿತ ಗೆಲುವನ್ನು ಸಾಧಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸದರ ತಂದೆಯವರಾದ ಭೀಮಪ್ಪ ಕಡಾಡಿ, ಸಂಸದರ ಪತ್ನಿ ಸುಮಿತ್ರಾ ಕಡಾಡಿ, ಮಕ್ಕಳಾದ ಸತೀಶ ಕಡಾಡಿ (ಬಿಡಿಸಿಸಿ ಬ್ಯಾಂಕ ನಿರ್ದೇಶಕ), ಲಾವಣ್ಯ, ಪ್ರತಿಭಾ ಉಪಸ್ಥಿತರಿದ್ದರು.

ರೇಡಿಯೋ ಫೋನ್ ಇನ್ ನೇರ ಪ್ರಸಾರ ಕಾರ್ಯಕ್ರಮ ಯಶಸ್ವಿ

ಕೊಪ್ಪಳ ಎಪ್ರಿಲ್ : ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಮುನರಾಬಾದ್ ಹಾಗೂ ಉಪನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ 2024ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ವಿದ್ಯಾರ್ಥಿಗಳು ತಮ್ಮ ಮುಂದಿನ ಭವಿಷ್ಯವನ್ನು ರೂಪಿಸಿಕೊಳ್ಳುವುದಕ್ಕಾಗಿ ವಿವಿಧ ರೀತಿಯ ಕೋರ್ಸುಗಳ ಬಗ್ಗೆ, ಆಯ್ಕೆ ವಿಧಾನ, ಉದ್ಯೋಗ ಅವಕಾಶಗಳು, ಶಿಷ್ಯವೇತನ, ಕಾಲೇಜುಗಳ ಬಗ್ಗೆ ಮಾಹಿತಿ ನೀಡಲು ಮೇ 03 ರಂದು ಗಂಗಾವತಿಯ 'ಗ್ರಾಮೀಣ ಭಾರತಿ' ಎಫ್.ಎಮ್. ರೇಡಿಯೋ ಕೇಂದ್ರದಿಂದ ಫೋನ್-ಇನ್ ನೇರ ಪ್ರಸಾರ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

ಬಹಳಷ್ಟು ವಿದ್ಯಾರ್ಥಿಗಳು, ಪಾಲಕರು, ಶಿಕ್ಷಕರು ಪ್ರಶ್ನೆಗಳನ್ನು ಕೇಳಿ ಮಾರ್ಗದರ್ಶನ ಪಡೆದರು. ಧಾರವಾಡ, ಗದಗ, ಬಾಗಲಕೋಟ, ಹರಪನಹಳ್ಳಿ, ಹೊಸಪೇಟೆ ಹಾಗೂ ಕೊಪ್ಪಳ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಪ್ರಶ್ನೆಗಳನ್ನು ಕೇಳಿ ತಮ್ಮ ಗೂಂದಲಗಳನ್ನು ನಿವಾರಿಸಿಕೂಂಡರು.

ಕಾರ್ಯಕ್ರಮದಲ್ಲಿ ಮುನರಾಬಾದ್‌ನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನ್ಯಾಸಕರಾದ ಶೇಖರ್ ಸಿ. ಅವರು ಸಂವಾದಕರಾಗಿ ಹಾಗೂ ರಾಷ್ಟ್ರೀಯ ಖ್ಯಾತ ಮಾರ್ಗದರ್ಶಕರಾದ ಇ. ಧನರಾಜ್ ರವರು ಮಾರ್ಗದರ್ಶನ ನೀಡಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಶ್ರೀಶೈಲ ಬಿರಾದಾರ ರವರು ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ನುಡಿಗಳನ್ನು ಹೇಳಿದರು. ಉಪನ್ಯಾಸಕರಾದ ಗವಿಸಿದ್ದೇಶ್ವರ ಬೆಣಕಲ್ಮಠ ಅವರು ಆಶಯ ನುಡಿಗಳನ್ನು ತಿಳಿಸಿದರು.

ಮುಂದಿನ ದಿನಗಳಲ್ಲಿ ನಡೆಯುವ ಸರಣಿಗಳಲ್ಲಿ ಜಿಲ್ಲೆಯ ಸಾರ್ವಜನಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

ಗರ್ಭಿಣಿಯರು ಕಾಲ-ಕಾಲಕ್ಕೆ ತಪಾಸಣೆ ಮಾಡಿಸಿಕೊಳ್ಳಬೇಕು: ಡಿಹೆಚ್‌ಓ ಡಾ.ವೈ.ರಮೇಶಬಾಬು ಸಲಹೆ

ಬಳ್ಳಾರಿ,ಮೇ : ಗರ್ಭಿಣಿಯರಿಗೆ ಸಹಜ ಹೆರಿಗೆ ನೋವು ಹೊರತು ಪಡಿಸಿ, ಯಾವುದೇ ತರಹದ ನೋವು ಕಂಡು ಬಂದರೂ ಸಹ ನರ್ಲಕ್ಷ್ಯ ಮಾಡದೆ ಹತ್ತಿರ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ವೈದ್ಯರ ಸಲಹೆ ಪಡೆಯ ಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರ ಮೇಶ್‌ಬಾಬು ಅವರು ತಿಳಿಸಿದರು.ಎಮ್ಮಿಗನೂರು ಗ್ರಾಮದಲ್ಲಿ ಕ್ಷೇತ್ರ ಬೇಟಿಯ ಸಂದರ್ಭದಲ್ಲಿ ಗರ್ಭಿಣಿ ತಾಯಿಯ ಮನೆ ಭೇಟಿ ಕೈಗೊಂಡು ತಾಯಿ ಕಾರ್ಡ್, ತೂಕ, ದೇಹದಲ್ಲಿ ರಕ್ತದ ಪ್ರಮಾಣ ಮುಂತಾದವುಗಳನ್ನು ಪರಿಶೀಲಿಸಿ ಅವರು ಮಾತನಾಡಿದರು.ಶಿಶು ಮತ್ತು ತಾಯಿ ಮರಣವನ್ನು ತಡೆಗಟ್ಟಲು ಗರ್ಭಿಣಿ ಎಂದು ಗೊತ್ತಾದ ದಿನದಿಂದ ಅಗತ್ಯ ಪರೀಕ್ಷೆಗಳು, ದೇಹದಲ್ಲಿ ರಕ್ತದ ಪ್ರಮಾಣ ಅನುಸಾರ ಕಬ್ಬಿಣಾಂಶ ಮಾತ್ರೆಗಳ ಸೇವನೆ, ತೂಕ, ರಕ್ತದೊತ್ತಡ, ಹೆಚ್‌ಐವಿ, ಹೆಚ್‌ಬಿಎಸ್‌ಎಜಿ ಮುಂತಾದ ಅಗತ್ಯ ಪರೀಕ್ಷೆಗೆ ಒಳಗಾಗಬೇಕು ಎಂದು ಸಲಹೆ ಮಾಡಿದರು.

ಹೆರಿಗೆಯನ್ನು ಆಸ್ಪತ್ರೆಯಲ್ಲಿಯೇ ಮಾಡಿಸಲು ಕುಟುಂಬದ ಸದಸ್ಯರಿಗೆ ತಿಳಿಸುವುದರ ಜೊತೆಗೆ ಪ್ರಸ್ತುತ ಪ್ರಖರ ಬಿಸಿಲಿನ ಹಿನ್ನಲೆಯಲ್ಲಿ ಗರ್ಭಿಣಿಯರ ಹೆಚ್ಚು ಪೌಷ್ಟಿಕಯುಕ್ತ ಆಹಾರ ಸೇವನೆಗೆ ಆದ್ಯತೆ ನೀಡಬೇಕು. ಸಾದ್ಯವಾದಷ್ಟು ಹೆಚ್ಚು ನೀರು ಕುಡಿಯುವುದಕ್ಕೆ ಕುಟುಂಬದ ಸದಸ್ಯರಿಗೆ ತಿಳಿಸಿದರು. ಇವುಗಳ ಜೊತೆಗೆ ಗರ್ಭಾವಸ್ಥೆಯಲ್ಲಿ ಕಂಡುಬರಬಹುದಾದ ತೊಂದರೆಗಳು ಮತ್ತು ಅವುಗಳ ಲಕ್ಷಣಗಳಾಧಾರದ ಮೇಲೆ ತಕ್ಷಣ ವೈದ್ಯರ ಭೇಟಿ ಮಾಡುವಂತೆ ತಿಳಿಸಿದರು.

*ಲಕ್ಷಣಗಳು:*ಎಕ್ಟೋಪಿಕ್ ಪ್ರೆಗ್ನೆನ್ಸಿ: 1 ರಿಂದ 3 ತಿಂಗಳ ಮೊದಲ ತ್ರೈಮಾಸಿಕದಲ್ಲಿ ಗರ್ಭಿಣಿಗೆ ಗೊತ್ತಿಲ್ಲದೆ ಎಕ್ಟೋಪಿಕ್ ಪ್ರೆಗ್ನೆನ್ಸಿ ಉಂಟಾಗುವ ತೊಂದರೆಯಾ ಗಿರುತ್ತದೆ. ಗರ್ಭಿಣಿಗೆ ಗರ್ಭನಾಳದಲ್ಲಿ ಅಥವಾ ಓವರಿಯಲ್ಲಿ, ಗರ್ಭಕೋ ಶದ ಹೊರಭಾಗದಲ್ಲಿ ಗರ್ಭಕಂಠದ ಹತ್ತಿರ ಗರ್ಭ ನಂತಲ್ಲಿ ಅದನ್ನು ಎಕ್ಟೋಪಿಕ್ ಪ್ರೆಗ್ನೆನ್ಸಿ ಎನ್ನಲಾಗುವುದು. ಸಾಮಾನ್ಯವಾಗಿ ಈ ರೀತಿಯ ಗರ್ಭದಾರಣೆಯಲ್ಲಿ ಕೆಲವೊಮ್ಮೆ ಗರ್ಭಿಣಿಗೆ ತೀವ್ರ ರೀತಿಯ ರಕ್ತಸ್ರಾವ, ಸಹಿಸಲಾಗದ ಅಸಾಧಾರಣ ನೋವು,ತಲೆ ತಿರುಗುವಿಕೆ ಕಂಡುಬರಬಹುದು.

*ಆಕಸ್ಮಿಕ ಗರ್ಭಪಾತ ಸಾಧ್ಯತೆಗಳು: 3 ರಿಂದ 6 ತಿಂಗಳ ಅವಧಿಯ ಎರಡನೇ ತ್ರೈಮಾಸಿಕ ಗರ್ಭಿಣಿ ಅವಧಿಯಲ್ಲಿ ಮಾಸ (ಪ್ಲಾಸೆಂಟಾ) ಗರ್ಭಕೋಶದ ಕೆಳಭಾಗಕ್ಕೆ ಬಂದು ಗರ್ಭಪಾತವಾಗುವ ಸಾಧ್ಯತೆ ಇರುತ್ತದೆ. ಸಾಮಾನ್ಯವಾಗಿ ಈ ಹಂತದಲ್ಲಿ ಕಾರಣವಿಲ್ಲದೆ ರಕ್ತಸ್ರಾವವಾಗುವುದು, ಇದ್ದಕ್ಕಿದ್ದಂತೆ ಹೊಟ್ಟೆನೋವು ಅಥವಾ ಮೊದಲನೆ ಹೆರಿಗೆ ಸಿಜೆರಿಯನ್ ಆಗಿದ್ದರೆ ನೋವು ಜಾಸ್ತಿ ಕಂಡುಬರುವುದು, ಗರ್ಭ ಕಂಠದ ಮಾರ್ಗ ಸಣ್ಣದಿದ್ದಾಗ, ದುರ್ವಾಸನೆಯುಕ್ತ ಯೋನಿಸ್ರಾವ ವಾಗುತ್ತಿದ್ದರೆ ನರ್ಲಕ್ಷಿಸದೆ ವೈದ್ಯರ ಬಳಿ ತಕ್ಷಣ ತೆರಳಬೇಕು.

ರಕ್ತದೊತ್ತಡದಿಂದ ಉಂಟಾಗುವ ತೊಂದರೆಗಳು:

6 ರಿಂದ 9 ತಿಂಗಳ ಅವಧಿಯ 3ನೇ ತ್ರೈಮಾಸಿಕ ಅವಧಿಯಲ್ಲಿ ಸಾಮಾನ್ಯವಾಗಿ ರಕ್ತದೊತ್ತಡ ಇದ್ದು ಕಾಲು, ಹೊಟ್ಟೆ, ಮುಖದಲ್ಲಿ ಬಾವು ಕಂಡುಬರುತ್ತಿದ್ದು ಕೆಲವು ಗರ್ಭಿಣಿಯರಲ್ಲಿ ರಕ್ತದೊತ್ತಡ ಹೆಚ್ಚಾಗಿ ಹೊಟ್ಟೆ ಗಟ್ಟಿಯಾದ ಅನುಭವ, ಮಗು ಮಿಸುಗಾಡದೆ ಇರುವುದು ಅಥವಾ ರಕ್ತಸ್ರಾವವಾಗುವುದು ಕಂಡುಬಂದಲ್ಲಿ ನರ್ಲಕ್ಷಿಸಬಾರದು. ಈ ಹಂತದಲ್ಲಿ ಗರ್ಭಕೋಶದಲ್ಲಿಯೇ ಮಾಸ (ಪ್ಲಾಸೆಂಟಾ) ಕಳಚಿಕೊಂಡು ರಕ್ತ ಹೆಪ್ಪುಗಟ್ಟುವುದರಿಂದ ಈ ರೀತಿ ಉಂಟಾಗುವ ಸಾಧ್ಯತೆ ಇರುತ್ತದೆ. ಇಂತಹ ಸನ್ನಿವೇಶಗಳಲ್ಲಿ ಕುಟುಂಬದ ಸದಸ್ಯರು ಗರ್ಭಿಣಿಯನ್ನು ಹತ್ತಿರದ ಆಸ್ಪತ್ರೆಗೆ ತಕ್ಷಣವೇ ಕರೆದುಕೊಂಡು ಬರುವ ಮೂಲಕ ತಾಯಿ ಮತ್ತು ಮಗುವಿನ ಜೀವಕ್ಕೆ ಅಪಾಯವಾಗುವ ಸನ್ನಿವೇಶಗಳನ್ನು ತಪ್ಪಿಸಬಹುದಾಗಿದೆ.ಅಲ್ಲದೆ ಪ್ರಸ್ತುತ ಬಿಸಿಲಿನ ಪ್ರಖರತೆ ಹೆಚ್ಚು ಇರುವ ಕಾರಣ ಹೆರಿಗೆ ನಂತರದಲ್ಲಿ ಬಾಣಂತಿಯು ಹೆಚ್ಚು ನೀರು ಸೇವಿಸುವಂತೆ ಮಾಡುವುದರಿಂದ ಹಾಲಿನ ಉತ್ಪತ್ತಿಯು ಹೆಚ್ಚಾಗುತ್ತದೆ. ಯಾವುದೇ ಕಾರಣಕ್ಕೂ ನವಜಾತ ಶಿಶುವಿಗೆ 06 ತಿಂಗಳು ವಯಸ್ಸಿನವರೆಗೆ ತಾಯಿ ಎದೆ ಹಾಲು ಹೊರತು ಪಡಿಸಿ ವೈದ್ಯರ ಸಲಹೆ ಇಲ್ಲದೆ ಎನನ್ನೂ ಕೊಡಬಾರದು ಮತ್ತು ಮಗುವಿನ ಒಂದು ವರ್ಷ ವಯಸ್ಸಿನೊಳಗೆ 12 ಮಾರಕ ರೋಗಗಳ ವಿರುದ್ಧ ನೀಡುವ ಲಸಿಕೆಗಳನ್ನು ರಾಷ್ಟ್ರೀಯ ಲಸಿಕಾ ಕಾರ್ಯಕ್ರಮದ ವೇಳಾಪಟ್ಟಿಯಂತೆ ಹಾಕಿಸುವ ಮೂಲಕ ಮಗುವಿನ ಆರೋಗ್ಯ ಸದೃಡವಾಗಿರಿಸಲು ಸಹಕರಿಸಬೇಕು ಎಂದು ತಿಳಿಸಿದರುಈ ಸಂದರ್ಭದಲ್ಲಿ ಕಂಪ್ಲಿ ತಾಲ್ಲೂಕು ಆರೋಗ್ಯ ಮೇಲ್ವಿಚಾರಣಾಧಿಕಾರಿ ಡಾ.ಅರುಣ್,ವೈದ್ಯಾಧಿಕಾರಿ ಡಾ.ಫಾರೂಖ್,ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ನರ್ಸಿಂಗ್ ಅಧಿಕಾರಿ ಗಿರೀಶ್, ಹಿರಿಯ ಆರೋಗ್ಯ ನಿರೀಕ್ಷಣಾದಿಕಾರಿ ಬಸವರಾಜ್, ಬಸನಗೌಡ, ವಿಘ್ನೇಶ, ಕೃಷ್ಣಮೂರ್ತಿ, ಪಿಹೆಚ್‌ಸಿಓ ನಂದಾ, ಪೂಜಾ, ಸಿಹೆಚ್‌ಓ ಸುಧಾ, ಹನುಮಂತಪ್ಪ, ಶೂಶ್ರೂಷಣಾಧಿಕಾರಿ ಮುತ್ತಾ್ಯಲಮ್ಮ, ಸುಮಿತ್ರಾ, ಆಶಾ ಕಾರ್ಯಕರ್ತೆ ಇಂದಿರಾ ಉಪಸ್ಥಿತರಿದ್ದರು.

ಕುಡಿಯುವ ನೀರಿನ ಸಮಸ್ಯೆಗೆ ಸ್ಪಂದಿಸಿ : ಡಿಸಿ

ವಿಜಯಪುರ ಮೇ-: ಜಿಲ್ಲೆಯಲ್ಲಿ ಉಲ್ಬಣಿಸಿರುವ ಕುಡಿಯುವ ನೀರಿನ ಸಮಸ್ಯೆಗೆ ಸೂಕ್ತ ಪರಿಹಾರೋಪಾಯಗಳನ್ನು ಕಂಡುಕೊಂಡು ಸಾರ್ವಜನಕರಿಗೆ ಸ್ಪಂದಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ದಂದು ಕುಡಿಯುವ ನೀರಿನ ಪರಿಸ್ಥಿತಿ ನರ್ವಹಣೆ ಕುರಿತು ಯೋಜನಾ ನರ್ದೇಶಕರು ಜಿಲ್ಲಾ ನಗರಾಭಿರೃದ್ಧಿ ಕೋಶ, ವಿಜಯಪುರ ನಗರ ನೀರು ಸರಬರಾಜು ಮಂಡಳಿ, ಸಣ್ಣ ನೀರಾವರಿ ಇಲಾಖೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು ಭೂತನಾಳ್ ಕೆರೆಯಿಂದ ಪ್ರತಿದಿನ 19.08ಎಂಎಲ್ ನೀರು ಸರಬರಾಜು ಮಾಡುವ ಯೋಜನೆಸಿದ್ದು, ಆದರೆ ಈ ಸದ್ಯ ಭೂತನಾಳ ಕೆರೆಯಲ್ಲಿ ನೀರಿನ ಲಭ್ಯತೆ ಕಡಿಮೆ ಇರುವದರಿಂದ ಲಭ್ಯ ಇರುವ ನೀರನ್ನು ವಿಜಯಪುರ ನಗರದಲ್ಲಿ ಬರುವ ಸ್ಥಳಿಯ ಸಂಸ್ಥೆಯ ಎಲ್ಲಾ ವಾರ್ಡುಗಳಿಗೆ ಸಮಪ್ರಮಾಣದಲ್ಲಿ ಸರಿಯಾಗಿ ನೀರು ಪೂರೈಸಿ. 14 ವಾರ್ಡ್‌ಗಳಿಗೆ ವಾರಕ್ಕೊಮ್ಮೆ , 8 ವಾರ್ಡ್‌ಗಳಿಗೆ 3 ಅಥವಾ ದಿನಕ್ಕೊಮ್ಮೆ, ಇನ್ನುಳಿದ 13 ನೀರು ಪೂರೈಸಲಾಗುತ್ತಿದೆ ಎನ್ನುವುದು ಸಮಂಜಸವಾಗಿರುವಿದಿಲ್ಲ ಎಂದರು.

ವಿಜಯಪುರ ನಗರದ 35 ವಾರ್ಡಗಳಲ್ಲಿ ವಿದ್ಯುತ್ ಚಾಲಿತ 476 ಕೊಳವೆ ಭಾವಿಗಳಿದ್ದು, ಅವುಗಳ ಮೂಖಾಂತರ ದಿನಬಳಕೆಗೆ ನೀರು ಸರಬರಾಜು ಮಾಡುವ ವ್ಯವಸ್ಥೆ ಮಾಡುವುದರಿಂದಲೂ ಸಮಸ್ಯೆ ಸರಿದುಗಿಸಬಹುದು. ಕೊಲಾರದಿಂದ ವಿಜಯಪುರ ನಗರಕ್ಕೆ ನೀರು ಸರಬರಾಜು ಆಗುವ ಪೈಪ್ ಲೈನ್ ದುರಸ್ಥಿ ಕಾಮಗಾರಿ ಸಂದರ್ಭದಲ್ಲಿ ಸಮರ್ಪಕವಾದ ವಿದ್ಯುತ್ ಸಂಪರ್ಕ ಕಲ್ಪಿಸುವಲ್ಲಿ ಸಮಸ್ಯೆ ಉಂಟಾಗಿ ಕೆಲವು ವಾರ್ಡ್‌ಗಳಲ್ಲಿ ಕುಡಿಯುವ ನೀರಿಗೆ ಸಾಕಳ್ಳು ತೊಂದರೆ ಆಗಿರುವುದು ಕಂಡುಬಂದಿರುತ್ತದೆ. ಈ ನಟ್ಟಿನಲ್ಲಿ ಇಂತಹ ತಾಂತ್ರಿಕ ದೋಳಗಳು ಮುಂದಿನ ದಿನಗಳಲ್ಲಿ ಆಗದಂತೆ ನೋಡಿಕೊಳ್ಳುವ ಮೂಲಕ ಜನರಿಗೆ ಸಕಾಲದಲ್ಲಿ ಕುಡಿಯುವ ನೀರಿನ ಪೂರೈಕೆ ಮಾಡಬೇಕು ಎಂದು ಹೇಳಿದರು. ಸಿಂದಗಿ ಪಟ್ಟಣಕ್ಕೆ ಬಳಗಾನೂರ ಕೆರೆಯಿಂದ ಸಿಂದಗಿ ಕೆರೆಗೆ ನೀರು ತುಂಬಿಸಲಾಗಿದ್ದು, ಮೇ ಅಂತ್ಯದವರೆಗೆ ನೀರಿನ ಸಮಸ್ಯೆ ಆಗುವುದಿಲ್ಲಾ ಒಂದು ವೇಳೆ ನೀರಿನ ತೋಂದರೆ ಕಂಡು ಬಂದಲ್ಲಿ, ಸಿಂದಗಿ ಪಟ್ಟಣದಲ್ಲಿ 100 ಕೊಳವೆಬಾವಿಗಳನ್ನು ಗುರುತಿಸಿದ್ದು, ಯಾವುದೇ ರೀತಿಯ ತೊಂದರೆ ಆಗದಂತೆ ಕ್ರಮ ವಹಿಸಲಾಗುತ್ತದೆ ಎಂದು ತಿಳಿಸಿದರು. ಇಂಡಿ ಮತ್ತು ಚಡಚಣ ತಾಲೂಕುಗಳಲ್ಲಿ ನೀರಿನ ಟ್ಯಾಂಕ್ ಮೂಲಕ ನೀರು ಪೂರೈಸಿ ಒಟ್ಟಿನಲ್ಲಿ ಯಾವುದೇ ರೀತಿಯಲ್ಲಿ ಕುಡಿಯುವ ನೀರಿನ ಸಮಸ್ಯ ಆಗಬಾರದು. ಜಾನುವಾರುಗಳಿಗೆ ಮೇವಿನ ತೊಂದರೆ ಆಗದಂತೆ ಕ್ರಮ ಕೈಗೊಳ್ಳಬೇಕಾಗಿದ್ದು, ರೈತರಿಗೆ ಮೇವನ್ನು ನೇರವಾಗಿ ವಿತರಿಸುವ ಕೆಲಸವಾಗಬೇಕು ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನರ್ವಾಹಕ ಅಧಿಕಾರಿ ರಿಶಿ ಆನಂದ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಸೇರಿ ಇತರರು ಇದ್ದರು.

ಬಾಲ ಕಾರ್ಮಿಕ ದಾಳಿ ಮೂವರು ಬಾಲಕರ ರಕ್ಷಣೆ

ವಿಜಯಪುರ ವಿ.-:ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ ಹಾಗೂ ವಿವಿಧ ಇಲಾಖೆಗಳ ಜಂಟಿ ಕಾರ್ಯಾಚರಣೆಯಲ್ಲಿ ಗುರುವಾರ ಅನಿರೀಕ್ಷಿತವಾಗಿ ಬಾಲಕಾರ್ಮಿಕ ದಾಳಿ ಕೈಗೊಂಡು ಮೂವರು ಬಾಲಕರನ್ನು ರಕ್ಷಣೆ ಮಾಡಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಲಾಯಿತು.ದಾಳಿಯಲ್ಲಿ ಕಾರ್ಮಿಕ ಅಧಿಕಾರಿ ಎಸ್.ಜಿ. ಖೈನುರ್, 2 ನೆ ವೃತ್ತದ ಕಾರ್ಮಿಕ ನಿರೀಕ್ಷಕರಾದ ಜಗದೇವಿ ಸಜ್ಜನ, ಶಿಕ್ಷಣ ಇಲಾಖೆಯ ಸಿ ಆರ್ ಪಿ ಜೆ.ಎಂ. ಕರಜಗಿ, ಹೆಚ್ಚುವರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಾಹೇಬಗೌಡ, ಬಾಲಕಾರ್ಮಿಕ ಯೋಜನಾ ಸಂಘದ ಯೋಜನಾ ನಿರ್ದೇಶಕಿ ಕುಮಾರಿ ನೀಲಮ್ಮ ಎಚ್ ಖೆಡಗಿ, ಮಕ್ಕಳ ಸಹಾಯವಾಣಿಯ ಮಂದಾಕಿನಿ ನಾಗಠಾಣ ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಕರ್ನಾಟಕದ ಬಹುತೇಕ ಆಣೆಕಟ್ಟುಗಳ ನಿರ್ಮಾಣ ಎಸ್.ಜಿ.ಬಾಳೇಕುಂದ್ರಿ ಹೆಗ್ಗಳಿಕೆ

ಬೆಳಗಾವಿ:-ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆಯ, ಕ.ಸಾ.ಪ 110ನೇ ಸಂಸ್ಥಾಪನಾ ದಿನಾಚರಣೆಯ ಹಾಗೂ ಕರ್ನಾಟಕದ ನೀರಾವರಿ ತಜ್ಞ ಇಂಜನೀಯರ್ ಎಸ್.ಜಿ. ಬಾಳೇಕುಂದ್ರಿ ಜನ್ಮ ದಿನದ ಪ್ರಯುಕ್ತ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕ ಹಾಗೂ ಕನ್ನಡ ಕ್ಷೇಮಾಭಿವೃದ್ಧಿ ಸಂಯುಕ್ತ ಆಶ್ರಯದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಕನ್ನಡ ಭವನದಲ್ಲಿ ಜರುಗಿತು.

ಈ ಸಂಧರ್ಭದಲ್ಲಿ ಮಾತನಾಡಿದ ನವೃತ್ತ ನ್ಯಾಯಾ ಧೀಶ ಉಲ್ಲಾಸ ಬಾಳೇ ಕುಂದ್ರಿ, ಇಂಜನೀಯರ್ ಎಸ್.ಜಿ.ಬಾಳೇಕುಂದ್ರಿ ಅವರ ಬದುಕು ಬರಹ ಕುರಿತು ಮಾರ್ಮಿಕವಾಗಿ ವಿಶ್ಲೇಷಿಸಿದರು. ಆಲಮಟ್ಟಿ ಡ್ಯಾಂ 165ಕೋಟಿ ವೆಚ್ಚ ಬಚ್ಚಾವತ್ ಕಮೀಟಿ ಶಿಫಾರಸ್ಸು, 1977-88 ರ ಸಾಲಿನಲ್ಲಿ ಕಾಡಾ ನರ್ದೇಶಕರಾಗಿ ನವೃತ್ತರಾದ ಎಸ್.ಜಿ.ಬಾಳೆಕುಂದ್ರಿ ಬೆಳಗಾವಿ ಜಿಲ್ಲೆಯ ಹಲವು ಸೇತುವೆ ನರ್ಮಾಣ ಕಾರ್ಯ ಭರದಿಂದ ನರ್ಮಾಣ ಕೈಗೊಂಡಿದ್ದರು. ಉತ್ತರ ಕರ್ನಾಟಕದ ಬಹುತೇಕ ನೀರಾವರಿ ಒದಗಿಸುವ ಹಿಡಕಲ್ ಡ್ಯಾಂ, ಆಲಮಟ್ಟಿ ಡ್ಯಾಂ, ನವಿಲು ತೀರ್ಥ ಡ್ಯಾಂ, ನಾರಾಯಣಪುರ ಆಣೆ